ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಆಯುಷ್ಮಾನ್ ಭಾರತ ಆರೋಗ್ಯ ಕಾರ್ಡ್‌ಗಳ ವಿತರಣೆ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ )

414 (408) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯಲ್ಲಿ ಇದುವರೆವಿಗೂ ಎಷ್ಟು ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್‌ಗಳನ್ನು ವಿತರಣೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಕಾರ್ಡ್‌ಗಳನ್ನು ವಿತರಣೆ ಮಾಡಲು ಎಷ್ಟು ಕೇಂದ್ರಗಳನ್ನು ತೆರೆಯಲಾಗಿದೆ ಹಾಗೂ ಎಲ್ಲೆಲ್ಲಿ ಈ ಕಾರ್ಡ್‌ಗಳನ್ನು ವಿತರಿಸಲು ಗುರುತಿಸಲಾಗಿದೆ ; (ವಿವರ ನೀಡುವುದು)

(ಇ) ಈ ಆಯುಷ್ಮಾನ್ ಭಾರತ್ ಆರೋಗ್ಯ ಕಾರ್ಡ್‌ಗಳನ್ನು ಹೊಂದಿರುವವರಿಗೆ ಉಚಿತವಾಗಿ ನೀಡುತ್ತಿರುವ ವೈದ್ಯಕೀಯ ಚಿಕಿತ್ಸೆಯ ವಿವರಗಳನ್ನು ನೀಡುವುದು ;

(ಈ) ಈ ಕಾರ್ಡ್‌ಗಳನ್ನು ವಿತರಿಸಲು ಗುರಿಯನ್ನು ನಿಗಧಿ ಮಾಡಲಾಗಿದೆಯೇ ; ಹಾಗಿದ್ದಲ್ಲಿ , ಇನ್ನು ಎಷ್ಟು ಕಾರ್ಡ್‌ಗಳನ್ನು ವಿತರಿಸಲಾಗುವುದು ; (ವಿವರ ನೀಡುವುದು)

(ಉ) ಈ ಕಾರ್ಡ್‌ಗಳನ್ನು ವಿತರಿಸಲು ನಿಗಧಿ ಮಾಡಿರುವ ಮಾನದಂಡವೇನು ? (ವಿವರ ನೀಡುವುದು)